ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**

ನೂರ ನಲವತ್ತೊಂದನೆಯ ಅಧಿವೇಶನ

ಮಂಗಳವಾರ, ದಿನಾಂಕ: 29ನೇ ಸೆಪ್ಟಂಬರ್, 2020

ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘಗಳ ನೋಂದಣಿ ಕುರಿತು

ಶ್ರೀ ಎಂ.ಎ. ಗೋಪಾಲಸ್ವಾಮಿ (ಸ್ಥಳೀಯ ಸಂಸ್ಥೆಗಳಿಂದ ಚುನಾಯಿತರಾದವರು) :-

914 (1025) ಮಾನ್ಯ ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯ ಸರ್ಕಾರ ಮತ್ತು ನಬಾರ್ಡ್ ಮಾರ್ಗಸೂಚಿಗಳನ್ನು ಮೀರಿ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘಗಳನ್ನು ನೋಂದಣಿ ಮಾಡುತ್ತಿರುವುದರಿಂದ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘಗಳು ಆರ್ಥಿಕವಾಗಿ ದುರ್ಬಲಗೊಂಡು ನಿಷ್ಕ್ರಿಯವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಅನಗತ್ಯ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘಗಳ ನೋಂದಣಿಯನ್ನು ನಿಯಂತ್ರಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು; (ಸಂಪೂರ್ಣ ಮಾಹಿತಿ ನೀಡುವುದು)

(ಆ) ರಾಜ್ಯ ಸರ್ಕಾರ ಮತ್ತು ನಬಾರ್ಡ್ ಮಾರ್ಗಸೂಚಿಗಳಂತೆ ಗ್ರಾಮ ಪಂಚಾಯತಿಗೊಂದು ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘಗಳನ್ನು ರಚಿಸಲು ಸರ್ಕಾರ ನಿಗಧಿಪಡಿಸಿರುವ ಮಾನದಂಡಗಳೇನು ; (ವಿವರ ನೀಡುವುದು)

(ಇ) ಪ್ರತಿ ಗ್ರಾಮ ಪಂಚಾಯತಿ ಒಂದು ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘವನ್ನು ರಚಿಸಲಾಗಿದೆಯೇ; ರಚಿಸದಿದ್ದಲ್ಲಿ, ಯಾವಾಗ ರಚಿಸಲಾಗುವುದು; ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘಗಳನ್ನು ರಚಿಸುವ ಕುರಿತು ಸರ್ಕಾರ ಕಾಲಮಿತಿಯೇನಾದರೂ ವಿಧಿಸಿದೆಯೇ? (ಹಾಸನ ಜಿಲ್ಲೆಯ ಗ್ರಾಮ ಪಂಚಾಯತಿವಾರು ಮಾಹಿತಿ ನೀಡುವುದು)